ಶಾಸನ ರಚನೆ

ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕ 1990

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೇ, 1990ನೇ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು :– ಪ್ರಸ್ತಾವ ಏನೆಂದರೆ, "1990ನೇ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1990ನೇ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ *

ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕ 1990

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು) :– ಮಾನ್ಯ ಅಧ್ಯಕ್ಷರೇ, 1990ನೇ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಉಪಾಧ್ಯಕ್ಷರು :– ಪ್ರಸ್ತಾವ ಏನೆಂದರೆ 1990ನೇ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು :– "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 3ರ ವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು :– "ಪ್ರಸ್ತಾವ ಏನೆಂದರೆ ಮೊದಲನೇ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ 'ದೀರ್ಘ ಶೀರ್ಷಿಕೆ' ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.)

---

* ಅನುಬಂಧ–1